# Akashvani : Bangalore
# Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**25.09.2025 / 6.40 pm**

**<><*<><>*><>**

ಮುಖ್ಯಾಂಶಗಳು

- ಸಾಮಾಜಿಕ ಆರ್ಥಿಕ ಸಮೀಕ್ಷೆಗೆ ತಡೆ ನೀಡಲು ನಿರಾಕರಿಸಿದ ಉಚ್ಚನ್ಯಾಯಾಲಯ
- ಸಮೀಕ್ಷೆಗೆ ಗೈರಾದ ಸಿಬ್ಬಂದಿ ವಿರುದ್ಧ ಕ್ರಮವಹಿಸಲು ಸಚಿವ ಸಂಪುಟ ತೀರ್ಮಾನ
- ಮಂಡ್ಯದ ಶ್ರೀರಂಗಪಟ್ಟಣದಲ್ಲಿ ಇಂದಿನಿಂದ ಪಾರಂಪರಿಕ ದಸರಾ
- ಕೆ.ಆರ್.ಎಸ್. ಬೃಂದಾವನದಲ್ಲಿ ನಾಳೆ ಕಾವೇರಿ ಆರತಿ - ಸ್ಥಳ ಪರಿಶೀಲಿಸಿದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್
- ಮೈಸೂರಿನಲ್ಲಿಂದು ಎಸ್.ಎಲ್.ಭೈರಪ್ಪ ಪಾರ್ಥಿವ ಶರೀರದ ಅಂತಿಮ ದರ್ಶನ; ನಾಳೆ ಅಂತ್ಯಕ್ರಿಯೆ

*******************

ಸರ್ಕಾರ ನಡೆಸುತ್ತಿರುವ ಸಾಮಾಜಿಕ ಆರ್ಥಿಕ ಸಮೀಕ್ಷೆಗೆ ತಡೆ ನೀಡಲು ಉಚ್ಚ ನ್ಯಾಯಾಲಯ ನಿರಾಕರಿಸಿದೆ. ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಹಾಗೂ ನ್ಯಾಯಮೂರ್ತಿ ಸಿಎಂ ಜೋಶಿ ಅವರಿದ್ದ ಪೀಠ ಸಮೀಕ್ಷೆಗೆ ಷರತ್ತು ವಿಧಿಸಿ ಮಧ್ಯಂತರ ಆದೇಶ ನೀಡಿದೆ. ದತ್ತಾಂಶವನ್ನು ಸರ್ಕಾರ ಸೇರಿದಂತೆ ಯಾರಿಗೂ ಬಹಿರಂಗ ಪಡಿಸಬಾರದು. ದತ್ತಾಂಶದ ಗೌಪ್ಯತೆಯನ್ನು ಆಯೋಗ ರಕ್ಷಿಸಬೇಕು, ಆಯೋಗ ಹೊರತು ಪಡಿಸಿ ಬೇರೆ ಯಾರಿಗೆ ದತ್ತಾಂಶ ಸಿಗುವ ಹಾಗಿಲ್ಲ. ಯಾವುದೇ ಮಾಹಿತಿ ನೀಡುವಂತೆ ಒತ್ತಡ ಹಾಕಬಾರದು ಎಂದು ನ್ಯಾಯಾಲಯ ಸೂಚಿಸಿದೆ. ದತ್ತಾಂಶದ ಗೌಪ್ಯತೆ ಸಂಬಂಧ ಪ್ರಮಾಣ ಪತ್ರ ಸಲ್ಲಿಸಲು ಹಿಂದುಳಿದ ವರ್ಗಗಳ

ಆಯೋಗಕ್ಕೆ ಸೂಚನೆ ನೀಡಿದ ನ್ಯಾಯಾಲಯ ವಿಚಾರಣೆಯನ್ನು ಡಿಸೆಂಬರ್ ೨ನೇ ವಾರಕ್ಕೆ ಮುಂದೂಡಿದೆ.

*******************

ರಾಜ್ಯ ಹಿಂದುಳಿದ ವರ್ಗಗಳ ಆಯೋಗ ನಡೆಸುತ್ತಿರುವ ಸಾಮಾಜಿಕ ಶೈಕ್ಷಣಿಕ ಸಮೀಕ್ಷಾ ಕಾರ್ಯದಿಂದ ವಿಮುಕ್ತರಾಗುವ ನೌಕರರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ನಿರ್ಧರಿಸಲಾಗಿದೆ. ಬೆಂಗಳೂರು ವ್ಯಾಪ್ತಿಯಲ್ಲಿ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಮುಖ್ಯ ಅಧಿಕಾರ ನೀಡಲಾಗಿದೆ ಎಂದು ಕಾನೂನು ಸಚಿವ ಎಚ್.ಕೆ. ಪಾಟೀಲ್ ಸಂಪುಟ ಸಭೆಯ ನಂತರ ಸುದ್ದಿಗಾರರಿಗೆ ತಿಳಿಸಿದ್ದಾರೆ. ಚಿಕ್ಕೋಡಿಗೆ ಮಂಜೂರಾಗಿದ್ದ ೫೦ ಹಾಸಿಗೆಗಳ ತೀವ್ರ ನಿಗಾ ಘಟಕವನ್ನ ಬೆಳಗಾವಿ ಜಿಲ್ಲೆಯ ಬೈಲಹೊಂಗಲ ತಾಲೂಕು ಆಸ್ಪತ್ರೆಗೆ ಸ್ಥಳಾಂತರಿಸಲು ಅನುಮೋದನೆ ನೀಡಿದೆ. ಕೊಡಗು ಜಿಲ್ಲೆಯ ವಿರಾಜಪೇಟೆಯಲ್ಲಿ ಪ್ರಸ್ತುತ ಇರುವ ೬೦ ಹಾಸಿಗೆ ಸಾಮರ್ಥ್ಯದ ಆಸ್ಪತ್ರೆ ಮೇಲ್ದರ್ಜೆಗೆ ಏರಿಸಲು ತೀರ್ಮಾನಿಸಲಾಗಿದೆ. ಕರ್ನಾಟಕ ರಾಜ್ಯ ರಸ್ತೆ ಸುರಕ್ಷತಾ ನಿಧಿಯಡಿಯಲ್ಲಿ ೧೧೦ ಜಂಕ್ಷನ್ ಗಳಲ್ಲಿ ಬೆಂಗಳೂರು ನಗರಕ್ಕೆ ಅವಶ್ಯಕವಿರುವ ಟ್ರಾಫಿಕ್ ಸಿಗ್ನಲ್‌ಗಳನ್ನು ೫೬ ಕೋಟಿ ೪೫ ಲಕ್ಷ ರೂಪಾಯಿಗಳ ಅಂದಾಜು ಅನುಷ್ಠಾನಗೊಳಿಸಲು ಅನುಮತಿ ನೀಡಿದೆ. "ಕರ್ನಾಟಕ ರಾಜ್ಯ ಕೌಶಲ್ಯ ಅಭಿವೃದ್ಧಿ ನೀತಿ-೨೦೨೫-೩೨ಕ್ಕೂ ಅನುಮೋದನೆ ನೀಡಲಾಗಿದೆ.

*******************

ಬೈಕ್ ಟ್ಯಾಕ್ಸಿ ನಿರ್ಬಂಧ ವಿಚಾರವಾಗಿ ರಾಜ್ಯ ಸರ್ಕಾರದ ವಿರುದ್ಧ ಹೈಕೋರ್ಟ್ ಅಸಮಾಧಾನ ವ್ಯಕ್ತಪಡಿಸಿದೆ. ಬೈಕ್ ಟ್ಯಾಕ್ಸಿ ಸಂಬಂಧ ನೀತಿ ಚೌಕಟ್ಟು ನಿಗದಿಪಡಿಸಲು ಒಂದು ತಿಂಗಳು ಸಮಯ ನೀಡಿದ್ದರೂ ಸರ್ಕಾರ ಈವರೆಗೆ ನೀತಿ ರೂಪಿಸಿಲ್ಲ. ಹೀಗಾಗಿ ಸರ್ಕಾರದ ನಿರ್ಬಂಧಕ್ಕೆ ತಡೆ ನೀಡುವ

ಬಗ್ಗೆ ಪರಿಶೀಲನೆ ನಡೆಸುತ್ತಿದ್ದೇವೆ ಎಂದು ನ್ಯಾಯಾಲಯ ಹೇಳಿದೆ. ಬೈಕ್ ಟ್ಯಾಕ್ಸಿ ಬಗ್ಗೆ ಸರ್ಕಾರವಾದ ಮಂಡಿಸಿದ ಬಳಿಕ ಸೂಕ್ತ ಆದೇಶ ಹೊರಡಿಸುವುದಾಗಿ ತಿಳಿಸಿದೆ. ಮುಂದಿನ ವಿಚಾರಣೆಯನ್ನ ನ್ಯಾಯಾಲಯ ಅಕ್ಟೋಬರ್ ೧೫ಕ್ಕೆ ನಿಗದಿಪಡಿಸಿದೆ. ಸರ್ಕಾರದ ನಿರ್ಧಾರ ಪ್ರಶ್ನಿಸಿ ಆಪ್ ಆಧಾರಿತ ಸೇವೆ ಒದಗಿಸುವ ಕಂಪನಿಗಳು ಉಚ್ಚನ್ಯಾಯಾಲಯದ ಮೊರೆ ಹೋಗಿದ್ದವು.

*******************

ನಾಲ್ಕು ದಿನಗಳ ಕಾಲ ನಡೆಯಲಿರುವ ಶ್ರೀರಂಗಪಟ್ಟಣ ಪಾರಂಪರಿಕ ದಸರಾ ಮಹೋತ್ಸವದ ಜಂಬು ಸವಾರಿಗೆ ಪುಷ್ಪಾರ್ಚನೆ ನೆರವೇರಿಸುವ ಮೂಲಕ ಹಿರಿಯ ರಂಗಕರ್ಮಿ ಟಿ.ಎಸ್.ನಾಗಾಭರಣ ಚಾಲನೆ ನೀಡಿದರು. ಶ್ರೀರಂಗಪಟ್ಟಣದ ಕಿರಂಗೂರಿನ ಬನ್ನಿ ಮಂಟಪದ ಬಳಿ ನಂದಿ ಕಂಬಕ್ಕೆ ಪೂಜೆ ನೆರವೇರಿಸಿ, ಮರದ ಅಂಬಾರಿಯಲ್ಲಿ ಚಾಮುಂಡೇಶ್ವರಿಯನ್ನು ಪ್ರತಿಷ್ಠಾಪಿಸಿ, ಅಂಬಾರಿ ಹೊತ್ತ ಆನೆ ಮಹೇಂದ್ರ ಶ್ರೀರಂಗಪಟ್ಟಣದಾದ್ಯಂತ ಹೆಜ್ಜೆ ಹಾಕಿತು. ಇದರ ಜೊತೆಗೆ ಲಕ್ಷ್ಮಿ ಮತ್ತು ಕಾವೇರಿ ಆನೆಗಳು ಸಹ ಹೆಜ್ಜೆ ಹಾಕಿದವು. ಈ ಸಂದರ್ಭದಲ್ಲಿ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ, ಶಾಸಕ ಎ.ಬಿ.ರಮೇಶ್ ಬಂಡಿಸಿದ್ದೇಗೌಡ, ಜಿಲ್ಲಾಧಿಕಾರಿ ಡಾ.ಕುಮಾರ, ಸಿಇಓ ನಂದಿನಿ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

*******************

ಉಪ ಮುಖ್ಯಮಂತ್ರಿ ಡಿ. ಕೆ ಶಿವಕುಮಾರ್ ಕೆ.ಆರ್.ಎಸ್ ಬೃಂದಾವನದಲ್ಲಿ ನಾಳೆಯಿಂದ ನಡೆಯಲಿರುವ ಕಾವೇರಿ ಆರತಿ ಕುರಿತಂತೆ ಸ್ಥಳ ಪರಿಶೀಲನೆ ನಡೆಸಿದರು. ವೇದಿಕೆ, ಕಾವೇರಿ ಆರತಿ ನಡೆಯುವ ಸ್ಥಳ ಮತ್ತು ವೀಕ್ಷಕರಿಗೆ ಆಸನ ವ್ಯವಸ್ಥೆ ಕುರಿತಂತೆ ಪರಿಶೀಲನೆ ನಡೆಸಿದ ಉಪಮುಖ್ಯ ಮಂತ್ರಿಗಳು ಅಧಿಕಾರಿಗಳಿಗೆ ಕಾರ್ಯಕ್ರಮವು ಯಾವುದೇ ಲೋಪವಿಲ್ಲದೆ ನಡೆಸಲು

ಸೂಚನೆ ನೀಡಿದರು. ಇದೇ ಸಂದರ್ಭದಲ್ಲಿ ಉಪಮುಖ್ಯಮಂತ್ರಿಗಳು ಕಾವೇರಿ ಆರತಿ ಪೂರ್ವ ತಾಲೀಮು ವೀಕ್ಷಣೆ ಮಾಡಿದರು.

*******************

ಹುಬ್ಬಳ್ಳಿಯ ಹೊಸೂರಿನ ವೀರ ಮಾರುತಿ ನಗರದ ನಿವಾಸಿಗಳಿಗೆ ವಾಣಿವಿಲಾಸ ವೃತ್ತದ ಬಳಿಯ ಕಲ್ಲೂರು ಬಡಾವಣೆಯಲ್ಲಿ ಕೇಂದ್ರ ಸರ್ಕಾರದ ಸ್ಮಾರ್ಟ್ ಸಿಟಿ ಯೋಜನೆಯಡಿ ನಿರ್ಮಿಸಿರುವ ಮನೆಗಳನ್ನು ಸಮುಚ್ಚಯದಲ್ಲಿ ಮನೆಗಳನ್ನು ಇಂದು ಹಂಚಿಕೆ ಮಾಡಲಾಯಿತು. ನಾಲ್ಕು ಬ್ಲಾಕ್ ಗಳಲ್ಲಿ ಒಟ್ಟು ೮೦ ಮನೆಗಳಿದ್ದು, ಅದರಲ್ಲಿ, ಮೊದಲ ಹಂತದಲ್ಲಿ ೪೭ ಮನೆಗಳನ್ನು ಹಂಚಿಕೆ ಮಾಡಲಾಯಿತು. ೧೮ ಕೋಟಿ ವೆಚ್ಚದಲ್ಲಿ ಮನೆಗಳನ್ನು ನಿರ್ಮಾಣ ಮಾಡಲಾಗಿದೆ. ಶಾಸಕ ಮಹೇಶ ಟೆಂಗಿನಕಾಯಿ ಮಾತನಾಡಿ, ಸ್ಮಾರ್ಟ್ ಸಿಟಿ ಯೋಜನೆಯಡಿ ಮನೆಗಳನ್ನು ನಿರ್ಮಾಣ ಮಾಡಲಾಗಿದೆ. ಈ ಮನೆಗಳನ್ನು ಬೇರೆಯವರಿಗೆ ಬಾಡಿಗೆ ನೀಡದಂತೆ ತಿಳಿಸಿದ್ದಾರೆ. ದ್ವಿತೀಯ ಪಿಯುಸಿ ಕಲಾ ವಿಭಾಗದಲ್ಲಿ ರಾಜ್ಯಕ್ಕೆ ಐದನೇ ರ್ಯಾಂಕ್ ಪಡೆದ ನಾಗವೇಣಿ ಮತ್ತು ವಿಜಯನಗರದಲ್ಲಿ ಲೈಂಗಿಕ ದೌರ್ಜನ್ಯಕ್ಕೊಳಗಾಗಿ ಕೊಲೆಯಾದ ಬಾಲಕಿಯ ಕುಟುಂಬಕ್ಕೆ ಮನೆಗಳನ್ನು ನೀಡಲಾಗಿದೆ. ಆಕಾಶವಾಣಿಯೊಂದಿಗೆ ಫಲಾನುಭವಿ ನಾಗವೇಣಿ ರಾಯಚೂರು ತಮ್ಮ ಸಂತಸ ಹಂಚಿಕೊಂಡಿದ್ದಾರೆ.

**ಧ್ವನಿ: ನಾಗವೇಣಿ ರಾಯಚೂರು ( 18 ಸೆಕೆಂಡುಗಳು)**

*******************

ಹಿರಿಯ ಸಾಹಿತಿ ಎಸ್.ಎಲ್.ಭೈರಪ್ಪ ಅವರ ಪಾರ್ಥಿವ ಶರೀರದ ಅಂತಿಮ ದರ್ಶನಕ್ಕೆ ಮೈಸೂರಿನ ಕಲಾಮಂದಿರದ ಆವರಣದಲ್ಲಿ ಜಿಲ್ಲಾಡಳಿತ ವ್ಯವಸ್ಥೆ ಮಾಡಿದೆ. ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಜಿಲ್ಲಾ ಉಸ್ತುವಾರಿ ಸಚಿವ ಡಾ ಹೆಚ್ ಸಿ ಮಹದೇವಪ್ಪ, ಶಾಸಕರಾದ ಕೆ ಶಿವಕುಮಾರ್, ಟಿ ಎಸ್ ಶ್ರೀವತ್ಸ, ಮಾಜಿ ಸಂಸದ ಪ್ರತಾಪ್ ಸಿಂಹ ಸೇರಿದಂತೆ ಮತ್ತಿತರರು ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದರು. ನಾಳೆ ಚಾಮುಂಡಿ ಬೆಟ್ಟದ ತಪ್ಪಲಿನಲ್ಲಿ ಸರ್ಕಾರಿ ಗೌರವದೊಂದಿಗೆ ಅಂತ್ಯಕ್ರಿಯೆ ನಡೆಯಲಿದೆ.

ಎಸ್.ಎಲ್.ಭೈರಪ್ಪನವರು ಕಾದಂಬರಿಗಳನ್ನು ಕಲ್ಪನೆಯಿಂದ ಬರೆದಿದ್ದು ಕಡಿಮೆ, ಪ್ರತಿಯೊಂದು ಕಾದಂಬರಿಯ ಹಿಂದೆ ವೈಯಕ್ತಿಕ ಅನುಭವ ದಟ್ಟವಾಗಿತ್ತು ಎಂದು ಡಾ. ನಾ. ಸೋಮೇಶ್ವರ ಆಕಾಶವಾಣಿಯೊಂದಿಗೆ ಮಾಹಿತಿ ಹಂಚಿಕೊಂಡಿದ್ದಾರೆ.

**ಧ್ವನಿ : ನಾ.ಸೋಮೇಶ್ವರ ( 22 ಸೆಕೆಂಡುಗಳು)**

********************

ಬೆಂಗಳೂರಿನ ಜಾಲಹಳ್ಳಿ ಕೇಂದ್ರೀಯ ವಿದ್ಯಾಲಯದಲ್ಲಿ ಇಂದು ನಡೆದ ಸ್ವಚ್ಛತಾ ಅಭಿಯಾನದ ಹಿನ್ನೆಲೆಯಲ್ಲಿ ಸ್ವಚ್ಛತೆ ಕೆಲಸಗಾರರಿಗೆ ಮತ್ತು ರಕ್ಷಣಾ ಪಾಲಕರಿಗೆ ಶಾಲೆಯ ಪ್ರಾಚಾರ್ಯರಾದ ರವೀಂದ್ರ ದೇವಾಡಿಗ ಸನ್ಮಾನಿಸಿದರು. ಇದೇ ವೇಳೆ ಸ್ವಾಮಿ ವಿವೇಕಾನಂದರ ಆದರ್ಶ ಆಧಾರಿತ ಮತ್ತು ಪ್ರಧಾನಿ ನರೇಂದ್ರ ಮೋದಿ ಬಾಲ್ಯದ ದಿನಗಳ ಚರಿತ್ರೆ ಆಧಾರಿತ ಕಿರು ಚಿತ್ರ ’ಚಲೋ ಜೀತೆ ಹೈ’ ಎಂಬ ೩೫ ನಿಮಿಷದ ಕಿರುಚಿತ್ರವನ್ನು ವಿದ್ಯಾರ್ಥಿಗಳು ವೀಕ್ಷಿಸಲು ವ್ಯವಸ್ಥೆ ಮಾಡಲಾಗಿತ್ತು. ಈ ಚಿತ್ರ ಇಂದಿನ ವಿದ್ಯಾರ್ಥಿಗಳಿಗೆ ಮಾದರಿಯಾಗಿದೆ ಎಂದು ಪ್ರಾಚಾರ್ಯ ರವೀಂದ್ರ ದೇವಾಡಿಗ ಆಕಾಶವಾಣಿಗೆ ತಿಳಿಸಿದ್ದಾರೆ.

**ಧ್ವನಿ : ರವೀಂದ್ರ ದೇವಾಡಿಗ  ( 13 ಸೆಕೆಂಡುಗಳು)**

*******************

ದೇಶದ ಅಭಿವೃದ್ಧಿಗೆ ಸಹಕಾರ ಕ್ಷೇತ್ರದ ಕೊಡುಗೆ ಮಹತ್ವದ್ದಾಗಿದ್ದು, ಕ್ಷೇತ್ರದ ಅಭಿವೃದ್ಧಿಗೆ ಸರ್ಕಾರದಿಂz ಎಲ್ಲಾ ರೀತಿಯ ನೆರವು ನೀಡಲಾಗುತ್ತಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್. ಮುನಿಯಪ್ಪ ತಿಳಿಸಿದ್ದಾರೆ. ದೇವನಹಳ್ಳಿ ತಾಲ್ಲೂಕು ವ್ಯವಸಾಯೋತ್ಪನ್ನ ಮಾರಾಟ ಸಹಕಾರ ಸಂಘ ನಿಯಮಿvದ ವಾರ್ಷಿಕ ಸಭೆಯಲ್ಲಿ ಸಹಕಾರ ಸಂಘಗಳ ಬೇಡಿಕೆಗಳನ್ನು ಸರ್ಕಾರಕ್ಕೆ ತಲುಪಿಸಲು ಕ್ರಮ ವಹಿಸಲಾಗುವುದು  ಎಂದು ಹೇಳಿದ್ದಾರೆ.

*******************

ಉತ್ತರ ಕನ್ನಡ ಜಿಲ್ಲೆಯಲ್ಲಿ ಯಾವುದೇ ರೀತಿಯ ವಿಪತ್ತುಗಳು ಸಂಭವಿಸಿದ ಸಂದರ್ಭದಲ್ಲಿ ಸಂತ್ರಸ್ಥರ ರಕ್ಷಣೆಗಾಗಿ ವೈದ್ಯಕೀಯ ಸೇವೆ, ಔಷಧಗಳು, ವೈದ್ಯಕೀಯ ಉಪಕರಣಗಳು ಸೇರಿದಂತೆ ಎಲ್ಲಾ ಅಗತ್ಯ ಮುಂಜಾಗ್ರತಾ ವ್ಯವಸ್ಥೆಗಳನ್ನು ಮಾಡಿಕೊಳ್ಳುವಂತೆ ಆರೋಗ್ಯ ಇಲಾಖೆಯ ಅಧಿಕಾರಿಗಳಿಗೆ ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯ ಸೂಚಿಸಿದ್ದಾರೆ. ಕಾರವಾರದಲ್ಲಿ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಉಪಕರಣಗಳು ಹಳೆಯದಾಗಿದ್ದರೆ ಆಧುನಿಕ ಉಪಕರಣಗಳ ಖರೀದಿಸುವಂತೆ ನಿರ್ದೇಶನ ನೀಡಿದ್ದಾರೆ.

*******************

೨೦೨೫-೨೬ ನೇ ಸಾಲಿನ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ರೈತರಿಂದ ಎಫ್.ಎ.ಕ್ಯೂ ಗುಣಮಟ್ಟದ ಭತ್ತ ಖರೀದಿಸಲು ಬೆಂಬಲ ಬೆಲೆ ನಿಗದಿಪಡಿಸಲಾಗಿದೆ. ನೋಂದಣಿ ಪ್ರಕ್ರಿಯೆಯಲ್ಲಿ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಲು ಕ್ರಮ ಕೈಗೊಳ್ಳಬೇಕೆಂದು ಗದಗ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದ್ದಾರೆ. ಮುಂಗಾರು ಹಂಗಾಮಿನ ಕನಿಷ್ಟ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಭತ್ತ ಹುಟ್ಟುವಳಿ ಖರೀದಿಸುವ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲೆಯ ಪ್ರತಿ ರೈತರಿಂದ ಪ್ರತಿ ಕ್ವಿಂಟಲ್ ಸಾಮಾನ್ಯ ಭತ್ತಕ್ಕೆ ೨ ಸಾವಿರದ ೩೬೯ ರೂಪಾಯಿಯಂತೆ ಮತ್ತು ಎ ಗ್ರೇಡ್ ಭತ್ತ ಪ್ರತಿ ಕ್ವಿಂಟಲ್ ಗೆ ೨ ಸಾವಿರದ ೩೮೯ ರೂಪಾಯಿಯಂತೆ ಖರೀದಿಸಲಾಗುವುದು ಎಂದು ಹೇಳಿದ್ದಾರೆ. ಭತ್ತ ಖರೀದಿ ಕೇಂದ್ರಗಳಲ್ಲಿ ರೈತರ ಹೆಸರಿನಲ್ಲಿ ವರ್ತಕರು ತರುವ ಭತ್ತ ಖರೀದಿಸದಂತೆ ಸೂಚನೆ ನೀಡಿದ್ದಾರೆ.

*******************

ಪಶ್ಚಿಮ ಬಂಗಾಳ ಸರ್ಕಾರದ ಜವಳಿ ಮತ್ತು ರೇಷ್ಮೆ ಆಯುಕ್ತರಾದ ಸೀಮಾ ಸರ್ಕಾರ್ ಮತ್ತು ಬೆಂಗಳೂರಿನ ಕೇಂದ್ರ ರೇಷ್ಮೆ ಮಂಡಳಿ, ವಿಜ್ಞಾನಿಗಳಾದ ಡಾ.ಮಹೇಶ್ ಕೆ.ಎನ್ ಮತ್ತು ಡಾ.ಮೆಹರ್ ಚಂದ್ರ ಮಂಡ್ಯ ಜಿಲ್ಲೆಯ ಮದ್ದೂರು ವಾಣಿಜ್ಯ ರೇಷ್ಮೆ ಹುಳು ಸಾಕಾಣಿಕೆಯ ಮನೆಗಳು ಮತ್ತು ಹಿಪ್ಪುನೇರಳೆ ತೋಟಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ರೇಷ್ಮೆ ಸಾಕಾಣಿಕೆಯ ಮನೆಗಳು ಮತ್ತು ಹಿಪ್ಪುನೇರಳೆ ತೋಟಗಳ ಬಗ್ಗೆ ಮಾಹಿತಿ ಪಡೆದ ಪಶ್ಚಿಮ ಬಂಗಾಳ ಸರ್ಕಾರದ ಜವಳಿ ಮತ್ತು ರೇಷ್ಮೆ ಆಯುಕ್ತೆ ಸೀಮಾ ಸರ್ಕಾರ್ ಬೆಳೆಗಾರರ ಕಾರ್ಯವನ್ನು ಶ್ಲಾಘಿಸಿದರು.

*******************